ಕರ್ನಾಟಕ ಸರಕಾರ
(ಕಂದಾಯ ಇಲಾಖೆ)

ಕ್ರ/ಕಂಶಾ/ಸಿಬ್ಬಂದಿ-3/ವಿವ-149/2017-18

ಜಿಲ್ಲಾಧಿಕಾರಿಗಳ ಕಾರ್ಯಾಲಯ
ಬೆಳಗಾವಿ ದಿನಾಂಕ :27/10/2018

## : ಪ್ರಕಟಣೆ :

ಬೆಳಗಾವಿ ಜಿಲ್ಲಾ ಕಂದಾಯ ಇಲಾಖೆಯ ಅಧಿನದಲ್ಲಿ ಬರುವ ಕಚೇರಿಗಳಲ್ಲಿ ಖಾಲಿ ಇರುವ 41 ಗ್ರಾಮ ಲೆಕ್ಕಿಗರ ಹುದ್ದೆಗಳ ನೇರ ನೇಮಕಾತಿ ಕುರಿತು ಆನ್ ಲೈನ್ ಮುಖಾಂತರ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಪರಿಶೀಲನಾ ಪಟ್ಟಿಯನ್ನು (1:5 ರ ಅನುಪಾತ) **ದಿನಾಂಕ :27/10/2018** ರಂದು ವೆಬ್ ಸೈಟ್ ವಿಳಾಸ http://belgaum-va.kar.nic.in ಹಾಗೂ belgaum.nic.in ನಲ್ಲಿ ಪ್ರಕಟಿಸಲಾಗಿದೆ.

ಈ ಪ್ರಕಟಣೆಯು ನೇಮಕಾತಿ ಆದೇಶವಲ್ಲ. ಈ ಪರಿಶೀಲನಾ ಪಟ್ಟಿ ಮತ್ತು ತಿರಸ್ಕೃತ ಅಭ್ಯರ್ಥಿಗಳ ಪಟ್ಟಿಗೆ ಆಕ್ಷೇಪಣೆ/ತಕರಾರುಗಳೇನಾದರೂ ಇದ್ದಲ್ಲಿ ದಾಖಲೆಗಳೊಂದಿಗೆ ಸಲ್ಲಿಸಲು **ದಿನಾಂಕ :12/11/2018** ರಂದು ಸಾಯಂಕಾಲ 05-30 ಗಂಟೆವರೆಗೆ **ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿ ಶಾಖೆಗೆ ತಲುಪುವಂತೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.** ನಂತರದಲ್ಲಿ ಬಂದ ಯಾವುದೇ ಆಕ್ಷೇಪಣೆ/ತಕರಾರು ಪರಿಗಣಿಸಲಾಗುವುದಿಲ್ಲ. ಆಕ್ಷೇಪಣೆ/ತಕರಾರು ಸಲ್ಲಿಸಿದ ಅಭ್ಯರ್ಥಿಯು ತನ್ನ ಪೂರ್ತಿ ವಿಳಾಸ ದೂರವಾಣಿ/ಮೊಬೈಲ್ ಸಂಖ್ಯೆ/ಇಮೇಲ್ ಐಡಿ (ಹೊಂದಿದ್ದಲ್ಲಿ) ವಿವರವನ್ನು ತಪ್ಪದೇ ಸಲ್ಲಿಸಬೇಕು. ಈ ಪರಿಶೀಲನೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು **ದಿನಾಂಕ :23/11/2018** ರಂದು **ಬೆಳಿಗ್ಗೆ 10-00 ಗಂಟೆಯಿಂದ ಸಂಜೆ 05-00 ಗಂಟೆಯವರೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಭವನದಲ್ಲಿ** ಜರುಗಿಸಲಾಗುವುದು. ಅಭ್ಯರ್ಥಿಗಳು ಖುದ್ದಾಗಿ ಈ ಕೆಳಕಂಡ ಮೂಲ ಹಾಗೂ ದೃಡೀಕೃತ ದಾಖಲೆಗಳ 2 ಸೆಟ್ ಗಳೊಂದಿಗೆ ತಪ್ಪದೇ ಹಾಜರಿದ್ದು ತಮ್ಮ ಹಾಜರಾತಿಯನ್ನು ದಾಖಲಿಸಬೇಕು. ದಾಖಲೆ ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು ಯಾವುದೇ ಕಾರಣಕ್ಕೆ ಅಭ್ಯರ್ಥಿಯು ಗೈರಾದಲ್ಲಿ ನಂತರದಲ್ಲಿ ಅವರ ದಾಖಲೆ ಪರಿಶೀಲನೆಗೆ ಪರಿಗಣಿಸಲಾಗುವುದಿಲ್ಲ. ಈ ಪರಿಶೀಲನಾ ಪಟ್ಟಿಯಲ್ಲಿ ಕಾಣಿಸಿದ ಅಭ್ಯರ್ಥಿಗಳಿಗೆ ಈ ಕಚೇರಿಯಿಂದ ತಿಳುವಳಿಕೆ ಪತ್ರ ಸ್ವೀಕೃತವಾಗದಿದ್ದರೂ ಸಹ ಈ ಮೇಲಿನ ದಿನಾಂಕದಂದು ಪರಿಶೀಲನೆಗೆ ಹಾಜರಾಗತಕ್ಕದ್ದು. ಪರಿಶೀಲನಾ ಸಮಯದಲ್ಲಿ ಬರುವ ಅಭ್ಯರ್ಥಿಗಳಿಗೆ ಈ ಕಾರ್ಯಾಲಯದಿಂದ ಪ್ರಯಾಣ ಭತ್ಯೆ ಇತ್ಯಾದಿ ನೀಡಲಾಗುವದಿಲ್ಲ. ಪರಿಶೀಲನಾ ಪಟ್ಟಿಯಲ್ಲಿ ಕಾಣಿಸಿದ ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆ ಬಗ್ಗೆ ಮಾತ್ರ ಸೀಮಿತವಾಗಿದ್ದು, ಅರ್ಹ ಅಭ್ಯರ್ಥಿಗಳನ್ನು ಮಾತ್ರ ನೇಮಕಾತಿಗೆ ಪರಿಗಣಿಸಲಾಗುವುದು.

**ಪರಿಶೀಲನಾ ಸಮಯದಲ್ಲಿ ಅಭ್ಯರ್ಥಿಗಳು ಹಾಜರಪಡಿಸಬೇಕಾದ ದಾಖಲೆಗಳು ಈ ಕೆಳಗಿನಂತಿವೆ.**

1) ಇತ್ತೀಚಿನ 2 ಪಾಸಪೋರ್ಟ ಅಳತೆಯ ಭಾವಚಿತ್ರಗಳು.
2) ದ್ವಿತೀಯ ಪಿಯುಸಿ ಮೂಲ ಅಂಕಪಟ್ಟಿ (ನೇಮಕಾತಿ ಅಧಿಸೂಚನೆಯಲ್ಲಿ ತಿಳಿಸಿರುವಂತೆ)
3) ವಯಸ್ಸಿನ ಬಗ್ಗೆ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಮೂಲ ಪ್ರಮಾಣ ಪತ್ರದ ಪ್ರತಿಯನ್ನು ಪರಿಶೀಲನೆಗಾಗಿ ಹಾಜರಪಡಿಸಬೇಕು.
4) ಜಾತಿಯ ಬಗ್ಗೆ ಮೀಸಲಾತಿ ಬಯಸಿದಲ್ಲಿ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
5) ಗ್ರಾಮೀಣ ಮೀಸಲಾತಿ ಹಾಗೂ ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರಗಳನ್ನು ಹಾಜರಪಡಿಸಬೇಕು.

6) ಅಂಗವಿಕಲ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಿಲ್ಲಾ ವೈದ್ಯಾಧಿಕಾರಿ ಮಂಡಳಿಯಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
7) ಮಾಜಿ ಸೈನಿಕ ಮೀಸಲಾತಿ ಬಯಸಿದ್ದಲ್ಲಿ ಅಭ್ಯರ್ಥಿಗಳು ಸೈನಿಕ ಸೇವೆಯಲ್ಲಿ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ ಹಾಜರಪಡಿಸಬೇಕು.
8) ಯೋಜನಾ ನಿರಾಶ್ರಿತ ಮೀಸಲಾತಿ ಬಯಸಿದ್ದಲ್ಲಿ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
9) ಸರಕಾರಿ ಸೇವೆಯಲ್ಲಿ ಇರುವವರು (ರಾಜ್ಯ/ಕೇಂದ್ರ) ಸಂಬಂಧಪಟ್ಟ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರವನ್ನು ಹಾಜರಪಡಿಸಬೇಕು.
10) ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ಬಗ್ಗೆ acknowdegement ಹಾಗೂ ಹಣ ತುಂಬಿದ ಬಗ್ಗೆ ಬ್ಯಾಂಕ್/ಆನ್ ಲೈನ್‌ದಿಂದ ಪಡೆದ ಮೂಲ ಚಲನ ಪ್ರತಿಥಿನ್ನು ಹಾಜರಪಡಿಸಬೇಕು.
11) ಅಭ್ಯರ್ಥಿಗಳು ಈ ಮೇಲಿನ ಎಲ್ಲ ದಾಖಲೆಗಳನ್ನು ಅಧಿಸೂಚನೆಯಲ್ಲಿ ತಿಳಿಸಿದಂತೆ, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ : 31-08-2018 ರ ಪೂರ್ವದಲ್ಲಿ ಪಡೆದ ಮೂಲ ದಾಖಲೆಗಳನ್ನು ಹಾಗೂ ಅವುಗಳ ಎರಡು ಸೆಟ್ ಧೃಡೀಕೃತ ಪ್ರತಿಯನ್ನು ತಪ್ಪದೇ ಹಾಜರುಪಡಿಸಬೇಕು.
12) ದಾಖಲೆಗಳ ಪರಿಶೀಲನೆ ಅವಧಿಯಲ್ಲಿ ಅಭ್ಯರ್ಥಿಗಳು ಹಾಜರಪಡಿಸಿದ ದಾಖಲೆಗಳ ಬಗ್ಗೆ ಅನುಮಾನ ಕಂಡುಬಂದಲ್ಲಿ ಅಭ್ಯರ್ಥಿಗಳ ಬಗ್ಗೆ ಪರೀಕ್ಷಿಸಿ ಕ್ರಮ ಜರುಗಿಸಲು ಜಿಲ್ಲಾಧಿಕಾರಿಗಳು ಅಧಿಕಾರ ಹೊಂದಿರುತ್ತಾರೆ.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.